## <u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

## <u>ಸಿ.ಸಿ. ಸಂಖ್ಯೆ: **2200/2024**</u>

<u>ಪಿರ್ಯಾದಿ</u> : ರಾಜ್ಯ, ಪರವಾಗಿ ಬಣಕಲ್ ಪೊಲೀಸ್ ಠಾಣೆ,
ಬಣಕಲ್.

ವಿರುದ್ಧ

<u>ಆರೋಪಿ</u> : ವಿದ್ಯಾಶ್ರೀ ಜೆ.ಆರ್. ಯಾನೆ ಇಂಪಾ,
ವಯಸ್ಸು ಸುಮಾರು 40 ವರ್ಷ,
ಕೋಂ. ಸತ್ಯೇಂದ್ರ ಬಿ.ಎಂ., ವಾಸಃ ಬಕ್ಕಿ ಗ್ರಾಮ,
ಬೆಟ್ಟಗೆರೆ ಅಂಚೆ, ಬಣಕಲ್ ಹೋಬಳಿ,
ಮೂಡಿಗೆರೆ ತಾಲ್ಲೂಕು.

<u>ದೋಷಾರೋಪಣೆ</u>

ಶ್ರೀ. ವಿಶ್ವನಾಥ್ ಎ., *C/c* ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆಗಳು ಏನೆಂದರೆಃ-

ದಿನಾಂಕಃ 08.02.2024 ರಂದು ಸಮಯದಲ್ಲಿ ಬಣಕಲ್ ಪೊಲೀಸ್ ಠಾಣಾ ವ್ಯಾಪ್ತಿಯ ಮೂಡಿಗೆರೆ ತಾಲ್ಲೂಕು ಬಣಕಲ್ ಹೋಬಳಿಯ ಬಕ್ಕಿ ಗ್ರಾಮದ ಸಾರ್ವಜನಿಕ ರಸ್ತೆಯ ಪಕ್ಕದಲ್ಲಿ ಚಾಸಾ-1 ಜಯಮ್ಮ ರವರು ತ್ರಿಪುರ ಗ್ರಾಮ ಪಂಚಾಯಿತಿ ವತಿಯಿಂದ ಅಂಗವಿಕಲರಿಗೆ ನೀಡುವ ಸ್ವಾವಲಂಬಿ ಗೂಡು ಅಂಗಡಿಯನ್ನು ಪಡೆದುಕೊಂಡು ರಸ್ತೆಯ ಪಕ್ಕದಲ್ಲಿ ಎಂದಿನಂತೆ ಸಂಜೆ 5.00 ಗಂಟೆಗೆ ಬೊಂಡ, ಬಜ್ಜಿ ತಿಂಡಿ ವಸ್ತುಗಳನ್ನು ವ್ಯಾಪಾರ ಮಾಡಿಕೊಂಡು ಜೀವನವನ್ನು ನಡೆಸುತ್ತಿದ್ದಾಗ ಇದನ್ನು ಸಹಿಸದ ಆರೋಪಿಯಾದ ನೀವು ಏಕಾಏಕಿ ಅವರ ಬಳಿ ಹೋಗಿ ಚಾಸಾ-1 ರವರನ್ನು ರಸ್ತೆಯಲ್ಲಿ ಅಡ್ಡಗಟ್ಟಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **341** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಚಾಸಾ1 ರವರಿಗೆ ಬೇವರ್ಸಿ ಮುಂಡೆ, ಸೂಳೆ ಮುಂಡೆ ಎಂದು ಅವಾಚ್ಯ ಶಬ್ದಗಳಿಂದ ಬೈದಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **504** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**3.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಚಾಸಾ1 ರವರು ಧರಿಸಿದ್ದ ನೈಟಿಯನ್ನು ಹರಿದು ಹಾಕಿ, ಅಂಗಡಿಯಲ್ಲಿದ್ದ

ಸಿಲಿಂಡರ್, ಗ್ಯಾಸ್‌ನ ಪೈಪ್ ನ್ನು ಕಿತ್ತು ಹಾಕಿ, ಪೆಟ್ಟಿಗೆ (ಗೂಡು) ಅಂಗಡಿಯಲ್ಲಿದ್ದ ಸುಮಾರು 5,000/- ರೂಪಾಯಿ ಮೌಲ್ಯದ ತಿಂಡಿ ಪಧಾರ್ಥಗಳನ್ನು ಮತ್ತು ಇತರೆ ವಸ್ತುಗಳನ್ನು ಹೊರಗೆ ಬಿಸಾಡಿ, ಚೆಲ್ಲಾಪಿಲ್ಲಿ ಮಾಡಿ, ನಷ್ಟವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **427** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**4.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ನಿಮ್ಮ ಮತ್ತು ಚಾಸಾ1 ರವರ ಗಲಾಟೆ ಬಿಡಿಸಲು ಬಂದ ಚಾಸಾ2 ರವರನ್ನು ಬೆದರಿಸಿ, ಪೋಲಿಸ್ ಪ್ರಕರಣ ದಾಖಲಿಸಿದರೆ ಕೈಕಾಲುಗಳನ್ನು ಮುರಿಸುತ್ತೇನೆಂದು ಬೆದರಿಕೆ ಹಾಕಿರುತ್ತೀರಿ ಹಾಗೂ ಚಾಸಾ-1 ರವರಿಗೆ ಇನ್ನು ಮುಂದೆ ಜಾಗದಲ್ಲಿ ಅಂಗಡಿ ಇದ್ದರೆ ಜೆ.ಸಿ.ಬಿ. ಯಿಂದ ಧ್ವಂಸಗೊಳಿಸುತ್ತೇನೆ ಎಂದು ಬೆದರಿಕೆ ಹಾಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **506** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ*,* ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ*.*

ಪ್ರ: 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ***?*** ಅವುಗಳು ನಿಮಗೆ ಅರ್ಥವಾಯಿತೇ***?***

ಆರೋಪಿಯ ಉತ್ತರ:

ಪ್ರ: 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ***?***

ಆರೋಪಿಯ ಉತ್ತರ:

***(***ಆರೋಪಿಗೆ ದಿನಾಂಕ 31.01.2025 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ*,* ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು*.* ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ***)***

**Sd/-**

ಮೂಡಿಗೆರೆ
ದಿನಾಂಕ: 31.01.2025

C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.